**Akashvani : Bangalore**
**Regional Bulletin In Kannada**
**31.03.2026 / 14.30  hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧.	ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಬೆಂಗಳೂರಿಗೆ ಆಗಮನ; ನಗರದಲ್ಲಿ ಬಿಗಿ ಭದ್ರತೆ**

**೨.	ವಿಧಾನಸಭಾ ಉಪಚುನಾವಣೆ; ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆಯಲ್ಲಿ ವಿವಿಧ ರಾಜಕೀಯ ಪಕ್ಷಗಳಿಂದ ಬಿರುಸಿನ ಪ್ರಚಾರ**

**೩.	ಗ್ಯಾಸ್ ಸಿಲಿಂಡರ್ ಕೊರತೆ ಹಿನ್ನೆಲೆ; ರಾಜ್ಯದಲ್ಲಿ ವಿದ್ಯುತ್ ಬಳಕೆ ಪ್ರಮಾಣ ಶೇಕಡ ೧೦ ರಷ್ಟು ಏರಿಕೆ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೪.	ಬೆಂಗಳೂರಿನ ಸಂಪಂಗಿ ಕೆರೆ ಶಕ್ತಿ ಪೀಠದಲ್ಲಿ ನೆರವೇರಿದ ದ್ರೌಪದಿ ದೇವಿ ಹಸಿ ಕರಗ ಶಕ್ತ್ಯೋತ್ಸವ; ಸಾವಿರಾರು ಭಕ್ತರು ಭಾಗಿ**

**೫.	ಮಡಿಕೇರಿಯಲ್ಲಿ ಇಂದು ಜನರಲ್ ತಿಮ್ಮಯ್ಯ ಅವರ ೧೨೦ನೇ ಜಯಂತಿ ಆಚರಣೆ**

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ. ಅವರು ಲೋಕಭವನದಲ್ಲಿ ತಂಗಲಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ನಾಳೆ ತುಮಕೂರಿನ ಸಿದ್ಧಗಂಗಾ ಮಠದಲ್ಲಿ ನಡೆಯಲಿರುವ ಶಿವಕುಮಾರ ಸ್ವಾಮೀಜಿಗಳ ೧೧೯ನೇ ಜಯಂತಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ತುಮಕೂರಿನಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದ್ದು, ೧೫ ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ. ತುಮಕೂರು ನಗರದಲ್ಲಿ ವಾಹನ ಸಂಚಾರವನ್ನು ಮಾರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ಯಾವುದೇ ಲೋಪವಾಗದಂತೆ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶುಸಭ್ ಕಲ್ಯಾಣ್ ಸೂಚಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ವಿಧಾನಸಭಾ ಉಪಚುನಾವಣೆ ಬಿರುಸುಗೊಂಡಿದೆ. ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎರಡನೇ ದಿನವೂ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಉಮೇಶ್ ಮೇಟಿ ಪರ ಪ್ರಚಾರ ನಡೆಸಿದರು. ಮುಗುಳೊಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಪ್ರಚಾರ ಸಭೆಯಲ್ಲಿ ಪಾಲ್ಗೊಂಡು, ಕ್ಷೇತ್ರದ ಅಭಿವೃದ್ಧಿಗೆ ಹೆಚ್.ವೈ.ಮೇಟಿಯವರ ಕೊಡುಗೆಗಳ ಮಾಹಿತಿಯನ್ನು ಒಳಗೊಂಡ "ಪ್ರಗತಿಯ ಪಕ್ಷಿನೋಟ" ಎಂಬ ಕೈಪಿಡಿಯನ್ನು ಬಿಡುಗಡೆಗೊಳಿಸಿದರು. ಸಚಿವ  ಆರ್.ಬಿ.ತಿಮ್ಮಾಪುರ, ವಿಧಾನ ಪರಿಷತ್ ಮಾಜಿ ಸಭಾಪತಿ ಎಸ್.ಆರ್. ಪಾಟೀಲ್, ಶಾಸಕರಾದ ಯಶವಂತರಾಯಗೌಡ ಪಾಟೀಲ್, ಹಂಪನಗೌಡ ಬಾದರ್ಲಿ, ವಿಜಯಾನಂದ ಕಾಶಪ್ಪನವರ್, ಮಾಜಿ ಸಚಿವ ಅಜಯಕುಮಾರ್ ಸರನಾಯಕ ಪ್ರಚಾರ ಸಭೆಯಲ್ಲಿ ಭಾಗವಹಿಸಿದ್ದರು.  ದಾವಣಗೆರೆ ದಕ್ಷಿಣ ವಿಧಾನಸಭಾ ಉಪ ಚುನಾವಣೆಗೂ ಅಭ್ಯರ್ಥಿಗಳ ಪ್ರಚಾರ ಕಾರ್ಯ ಚುರುಕುಗೊಂಡಿದೆ. ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್  ಮಲ್ಲಿಕಾರ್ಜುನ ಪರವಾಗಿ ಇಂದು ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ  ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್  ಸುರ್ಜೆವಾಲ, ಸೇರಿದಂತೆ ಹಲವು ಸಚಿವರು, ಶಾಸಕರು ಪ್ರಚಾರ ನಡೆಸಿದರು. ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ, ಸೇರಿದಂತೆ ಪಕ್ಷದ ಪ್ರಮುಖ ನಾಯಕರು ಕ್ಷೇತ್ರದ ಹಲವೆಡೆ ಮತಯಾಚಿಸಿದರು.

<><*<><>*><>

ಕೇಂದ್ರ ಸರ್ಕಾರ ಜನರಿಗೆ ಉಜ್ವಲ ಯೋಜನೆ ಬದಲಾಗಿ ಸೌದೆ ಒಲೆ ಯೋಜನೆ ನೀಡಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜಂಟಿ ಸುದ್ದಿಗೋಷ್ಠಿ ನಡೆಸಿ, ಮಾತನಾಡಿ, ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕಳೆದ ೧೫ ದಿನಗಳಿಂದ ರಾಜ್ಯದಲ್ಲಿ ವಿದ್ಯುತ್ ಬಳಕೆ ಪ್ರಮಾಣ ಶೇಕಡಾ ೧೦ ರಷ್ಟು ಏರಿಕೆಯಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ೯೦೦ ಔಷಧಗಳ ದರ ಏರಿಕೆ ಜೊತೆಗೆ ಸಿಮೆಂಟ್ ಬೆಲೆಯೂ ೫೦ ರಿಂದ ೧೦೦ ರೂಪಾಯಿಗೆ ಹೆಚ್ಚಳವಾಗಿದೆ ಎಂದು ಅವರು ದೂರಿದ್ದಾರೆ. ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ಕೇಂದ್ರ ಸರ್ಕಾರ ೯೦೦ ಕೋಟಿ ರೂಪಾಯಿ ಟೋಲ್ ವಸೂಲಿ ಮಾಡಿದೆ. ಅದೇ ಹಣವನ್ನು ರಾಜ್ಯಕ್ಕೆ ನೀಡಿದರೆ, ಗ್ರಾಮೀಣ ಭಾಗದ ರಸ್ತೆಗಳನ್ನು ಸರ್ಕಾರ ಅಭಿವೃದ್ಧಿ ಮಾಡಬಹುದು ಎಂದು ತಿಳಿಸಿದ್ದಾರೆ.

<><*<><>*><>

ನಾಳೆಯಿಂದ ದೇಶದಾದ್ಯಂತ ಜನಗಣತಿ ಆರಂಭವಾಗಲಿದೆ. ಇದು ಸ್ವಾತಂತ್ರ ನಂತರದ ೮ ನೇ ಜನಗಣತಿಯಾಗಿದೆ. ಈ ಬಾರಿ ೨ ಹಂತಗಳಲ್ಲಿ ಜನಗಣತಿ ನಡೆಯಲಿದೆ. ಮೊದಲ ಹಂತದಲ್ಲಿ ಏಪ್ರಿಲ್ ೧ ರಿಂದ ಸೆಪ್ಟಂಬರ್ ೩೦ರವರೆಗೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮನೆಗಳ ಪಟ್ಟಿ ಮತ್ತು ಸ್ವಯಂಗಣತಿ ನಡೆಯಲಿವೆ. ಎರಡನೇ ಹಂತದಲ್ಲಿ ಜಾತಿ ಗಣತಿ ಹಮ್ಮಿಕೊಳ್ಳಲಾಗಿದೆ. ಜನಗಣತಿಗೆ ಸ್ವಯಂ ನೋಂದಣಿ ಆರಂಭವಾಗಲಿದ್ದು, ಸಾರ್ವಜನಿಕರು ಈ ಪ್ರಕ್ರಿಯೆಯಲ್ಲಿ ಭಾಗವಹಿಸಿ ತಮ್ಮ ಮನೆಯ ವಿವರಗಳನ್ನು ನೀಡಬೇಕೆಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ.ರುದ್ರೇಶ ಘಾಳಿ ತಿಳಿಸಿದ್ದಾರೆ. ಕೇಂದ್ರ ಸರ್ಕಾರ ನೀಡಿರುವ se.ಛeಟsus.gov.iಟ ವೆಬ್ ಸೈಟ್ ನಲ್ಲಿ ಮೊಬೈಲ್ ನಂಬರ್ ಮೂಲಕ ನೋಂದಣಿ ಮಾಡಿಕೊಂಡು, ನಿಮ್ಮ ಸ್ಥಳವನ್ನು ಆಯ್ಕೆ ಮಾಡಿ, ನಕ್ಷೆಯಲ್ಲಿ ಮನೆಯನ್ನು ಗುರುತಿಸಿ, ಮನೆಯವರ ವಿವರಗಳೊಂದಿಗೆ ೩೩ ಪ್ರಶ್ನೆಗಳಿಗೆ ಸರಿಯಾದ ಉತ್ತರಗಳನ್ನು ನೀಡಬೇಕು. ಆ ಬಳಿಕ ಬರುವ ರೆಫರೆನ್ಸ್ ಐಡಿ ನಂಬರ್ ನ್ನು ಎಪ್ರಿಲ್ ೧೫ ರ ನಂತರ ಮನೆಗೆ ಬರುವ ಗಣತಿದಾರರಿಗೆ ನೀಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

<><*<><>*><>

ಬೆಂಗಳೂರಿನಲ್ಲಿ ನಾಳೆ ಕರಗ ಶಕ್ತ್ಯೋತ್ಸವ ಅದ್ಧೂರಿಯಾಗಿ ನಡೆಯಲಿದೆ. ಕರಗ ಮಹೋತ್ಸವದ ಮೊದಲ ಭಾಗವಾಗಿ ಇಂದು ಬೆಂಗಳೂರಿನ ಸಂಪಂಗಿಕೆರೆಯ ಶಕ್ತಿಪೀಠದಲ್ಲಿ ಹಸಿ ಕರಗ ಅದ್ಧೂರಿಯಾಗಿ ನಡೆಯಿತು. ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಹಸಿ ಕರಗವನ್ನು ತಿಗಳರ ಪೇಟೆಯಲ್ಲಿರುವ ಧರ್ಮರಾಯ ಸ್ವಾಮಿ ದೇಗುಲಕ್ಕೆ ತರಲಾಯಿತು. ನಾಳೆ ಮಧ್ಯರಾತ್ರಿ ೧೨.೩೦ ರಿಂದ ಹೂವಿನ ಕರಗದ ಮೆರವಣಿಗೆ ನಗರದ ಪ್ರಮುಖ ಬೀದಿಯಲ್ಲಿ ನಡೆಯಲಿದೆ. ಕೆಂಪೇಗೌಡರ ಕೋಟೆ ಒಳಗೆ ಸಂಚಾರ ಮಾಡಿ, ಸುಮಾರು ೨೬ ಕಿಲೋಮಿಟರ್ ಸಂಚರಿಸಿ, ಕರಗ ಭಕ್ತರಿಗೆ ದರ್ಶನ ನೀಡಲಿದೆ. ೧೬ನೇ ಬಾರಿಗೆ ಪೂಜಾರಿ ಜ್ಞಾನೇಂದ್ರ ಕರಗ ಹೊರಲಿದ್ದಾರೆ. ಈ ಬಾರಿ ಕರಗಕ್ಕಾಗಿ ವಿಶೇಷವಾಗಿ ವಿದ್ಯುತ್ ದೀಪಾಲಂಕಾರ ಮಾಡಲಾಗಿದೆ. ಕರಗ ವೀಕ್ಷಣೆಗೆ ಹೊರ ಜಿಲ್ಲೆ ಹಾಗೂ ಹೊರ ರಾಜ್ಯದಿಂದಲೂ ಭಕ್ತರು ಆಗಮಿಸಲಿದ್ದಾರೆ. ಆದಿಶಕ್ತಿ ಸ್ವರೂಪಿಣಿಯಾದ ದ್ರೌಪದಿ ಆರಾಧನೆಗಾಗಿ ಕರಗ ಮಹೋತ್ಸವ ನಡೆಸಲಾಗುತ್ತಿದೆ.

<><*<><>*><>

ಭಾರತದ ಸೇನಾ ಪಡೆಯ ನಾಯಕರಾಗಿದ್ದ ಜನರಲ್ ತಿಮ್ಮಯ್ಯ ಅವರ ೧೨೦ನೇ ಜಯಂತಿಯನ್ನು ಮಡಿಕೇರಿಯಲ್ಲಿಂದು ಅರ್ಥಪೂರ್ಣವಾಗಿ ಆಚರಿಸಲಾಯಿತು. ತಿಮ್ಮಯ್ಯ ಅವರ ಭಾವಚಿತ್ರಕ್ಕೆ ಶಾಸಕ ಎ.ಎಸ್. ಪೊನ್ನಣ್ಣ ಪುಷ್ಪನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅವರು, ಜನರಲ್ ತಿಮ್ಮಯ್ಯ ಅವರ ಸೇನಾ ವೃತ್ತಿ ಮತ್ತು ಜೀವನವು ಎಲ್ಲರಿಗೂ ಮಾದರಿಯಾಗಿದೆ ಎಂದು ತಿಳಿಸಿದರು. ಯಾವುದೇ ಆಧುನಿಕ ಸೌಲಭ್ಯಗಳಿಲ್ಲದ

ಅಂದಿನ ಕಾಲದಲ್ಲಿಯೇ ತಿಮ್ಮಯ್ಯ ಅವರು ಶತ್ರುಪಡೆಗಳನ್ನು ಬಗ್ಗುಬಡಿಯುವ ಚಾಣಕ್ಯತೆಯನ್ನು ಹೊಂದಿದ್ದರು ಎಂದು ಹೆಮ್ಮೆಯಿಂದ ಸ್ಮರಿಸಿಕೊಂಡರು. ಮಡಿಕೇರಿಯಲ್ಲಿರುವ ೫೩ ವರ್ಷಗಳ ಇತಿಹಾಸ ಹೊಂದಿರುವ ತಿಮ್ಮಯ್ಯ ಪ್ರತಿಮೆಗೂ ಗಣ್ಯರು ಪುಷ್ಪಾರ್ಚನೆ ಸಲ್ಲಿಸಿದರು.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು**

**ಇನ್ನೂ ಸಂಕ್ಷಿಪ್ತ ಸುದ್ದಿಗಳು**

೧. ಮೈಸೂರಿನಲ್ಲಿ ಬಂಧಿಸಲಾಗಿದ್ದ ಒಂದು ಸಾವಿರಕ್ಕೂ ಹೆಚ್ಚು ಹುಸಿ ಬಾಂಬ್ ಕರೆ ಮೇಲ್ ಮಾಡುತ್ತಿದ್ದ ಮೈಸೂರಿನ ವ್ಯಕ್ತಿಯನ್ನು ದೆಹಲಿ ಪೊಲೀಸರ ವಿಚಾರಣೆಯ ಬಳಿಕ ಮುಂಬೈ ಪೊಲೀಸರು ಇಂದು ವಿಚಾರಣೆಗೆ ಒಳಪಡಿಸಲಿದ್ದಾರೆ.

೨. ಗುಡ್ ಫ್ರೈಡೇ ಹಬ್ಬದ ಹಿನ್ನೆಲೆಯಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ಕಡಿಮೆ ಮಾಡಲು ನೈಋತ್ಯ ರೈಲ್ವೆಯು ಯಶವಂತಪುರ, ತಾಳಗುಪ್ಪ ನಡುವೆ ವಿಶೇಷ ರೈಲುಗಳನ್ನು ಓಡಿಸಲು ನಿರ್ಧರಿಸಿದೆ, ಯಶವಂತಪುರ-ತಾಳಗುಪ್ಪ ವಿಶೇಷ ಎಕ್ಸ್ ಪ್ರೆಸ್ ರೈಲು ಏಪ್ರಿಲ್ ೦೩ ರಂದು ರಾತ್ರಿ ೧೦:೪೫ಕ್ಕೆ ಯಶವಂತಪುರದಿಂದ ಹೊರಡಲಿದೆ.

೩. ಕರ್ನಾಟಕ ಮತ್ತು ತಮಿಳುನಾಡು ಗಡಿಭಾಗದಲ್ಲಿ ಇರುವ ತಮಿಳುನಾಡಿನ ಬಣ್ಣಾರಿ ಮಾರಿಯಮ್ಮನ ಕೊಂಡೋತ್ಸವ ಇಂದು ಬೆಳಗಿನ ಜಾವ ನೆರವೇರಿದ್ದು ಕರ್ನಾಟಕದ ಭಕ್ತರು ಸೇರಿದಂತೆ ಲಕ್ಷಾಂತರ ಮಂದಿ ಭಕ್ತರು ಭಾಗಿಯಾಗಿದ್ದರು.

೪. ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಹಾಗೂ ಆಹಾರ ಸುರಕ್ಷತಾ ತರಬೇತಿ ಪ್ರಮಾಣ ಪತ್ರ ಕೇಂದ್ರದ ವತಿಯಿಂದ ಗೋಕರ್ಣದ ಆಹಾರ ವಹಿವಾಟುದಾರರಿಗೆ ಮೊದಲ ಹಂತದ ಒಂದು ದಿನದ ಆಹಾರ ಸುರಕ್ಷತಾ ತರಬೇತಿ ಕಾರ್ಯಕ್ರಮವು ಗೋಕರ್ಣದ ವೀರಶೈವ ಮಠ ಸಭಾಭವನದಲ್ಲಿ ನಡೆಯಿತು.

೫. ಯುವಜನರನ್ನು ಮತ್ತೆ ಓದಿನತ್ತ ಆಕರ್ಷಿಸುವ ಕಾರ್ಯವನ್ನು ವಿಕ್ರಮಪುರ ಓದುಗರ ಬಳಗ ಕೈಗೆತ್ತಿಕೊಳ್ಳಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ ಯಾದಗಿರಿ ಜಿಲ್ಲಾ ಅಧ್ಯಕ್ಷ ಸಿದ್ದಪ್ಪ ಹೊಟ್ಟಿ ತಿಳಿಸಿದ್ದಾರೆ.

೬. ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ನಗನೂರ ಗ್ರಾಮದಲ್ಲಿ ಕೃಷಿ ಹೊಂಡದಲ್ಲಿ ಮುಳುಗಿ ಭಾನುವಾರ ಒಂದೇ ಕುಟುಂಬದ ನಾಲ್ವರು ಮಕ್ಕಳು ಸಾವನ್ನಪ್ಪಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಹಾಗೂ ಜಿಲ್ಲಾಧಿಕಾರಿ ಹರ್ಷಲ್ ಬೋಯರ್ ಮೃತರ ಮನೆಗೆ ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**